Akashvani : Bangalore

Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

24.06.2026 18.40 hrs

---

ಮುಖ್ಯಾಂಶಗಳು

- ರಾಜ್ಯದಲ್ಲಿ ಗ್ರಾಮೀಣ ಕುಡಿಯುವ ನೀರು ಪೂರೈಕೆಗೆ ಹಣದ ಕೊರತೆ ಇಲ್ಲ ; ಸಚಿವ ಈಶ್ವರ್ ಬಿ ಖಂಡ್ರೆ ಸ್ಪಷ್ಟನೆ
- ವಸತಿ ಇಲಾಖೆಯ ಅಧಿಕಾರಿಗಳೊಂದಿಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಪ್ರಗತಿ ಪರಿಶೀಲನಾ ಸಭೆ
- ಬೆಂಗಳೂರಿನಲ್ಲಿ ಭಾರತದ ಅಧ್ಯಕ್ಷತೆಯಲ್ಲಿ ಬ್ರಿಕ್ಸ್ ಬಾಹ್ಯಾಕಾಶ ಏಜೆನ್ಸಿಗಳ ಸಭೆ ; ಹವಾಮಾನ ಬದಲಾವಣೆ, ದೂರ ಸಂವೇದಿ ಪ್ರಯೋಜನ ಕುರಿತಂತೆ ಚರ್ಚೆ
- ದೇವನಹಳ್ಳಿ ಭೂ-ಸ್ವಾದೀನ ವಿಚಾರ ; ರೈತರಿಗೆ ಎಕರೆಗೆ ೨ ಕೋಟಿ ೭೦ ಲಕ್ಷ ರೂಪಾಯಿ ಪರಿಹಾರಕ್ಕೆ ಕೆಐಎಡಿಡಿಗೆ ಶಿಫಾರಸ್ಸು
- ಕೊಪ್ಪಳದಲ್ಲಿ ನಾಳೆ ತುಂಗಭದ್ರಾ ಅಣೆಕಟ್ಟೆಯ ೩೩ ಕ್ರಸ್ಟ್‌ಗೇಟ್‌ಗಳ ಲೋಕಾರ್ಪಣೆ

---

ರಾಜ್ಯದಲ್ಲಿ ಗ್ರಾಮೀಣ ಕುಡಿಯುವ ನೀರು ಪೂರೈಕೆಗೆ ಹಣದ ಕೊರತೆ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಬಿ ಖಂಡ್ರೆ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಪಂಚಾಯತ್ ರಾಜ್ ಆಯುಕ್ತಾಲಯದಲ್ಲಿ ಉನ್ನತ ಅಧಿಕಾರಿಗಳೊಂದಿಗೆ ಸಭೆ ನಡೆಸಿದ ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು ೭೫ ಲಕ್ಷ ಆಸ್ತಿಗಳು, ಗ್ರಾಮ ಠಾಣಾವ್ಯಾಪ್ತಿಯಲ್ಲಿ ಬರುತ್ತಿದ್ದು, ಕೆಲವರ ಬಳಿ ತಮ್ಮ ಸ್ವತ್ತಿಗೆ ಸಂಬಂಧಿಸಿದಂತೆ ಯಾವುದೇ ದಾಖಲೆ ಇಲ್ಲ. ಈ ಹಿನ್ನೆಲೆಯಲ್ಲಿ ೧೦೦ ದಿನಗಳೊಳಗಾಗಿ ಗ್ರಾಮಠಾಣಾ ಆಸ್ತಿಗಳಿಗೆ ಇ-ಖಾತಾ ವಿತರಿಸಲು ಸೂಚಿಸಲಾಗಿದೆ ಎಂದು ತಿಳಿಸಿದ್ದಾರೆ.

ಈವರೆಗೆ ರಾಜ್ಯದಲ್ಲಿ ೧೦ ಕೋಟಿ ೧೭ ಲಕ್ಷ ಆಸ್ತಿಗಳಿಗೆ ಬಿ-ಖಾತಾ ನೀಡಲಾಗಿದೆ. ಇನ್ನೂ ೬೦ ಲಕ್ಷ ಆಸ್ತಿಗಳಿಗೆ ಎ ಮತ್ತು ಬಿ-ಖಾತಾ ನೀಡಬೇಕಾಗಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ಎಲ್ ನಿ ನೊ ಪ್ರಭಾವದಿಂದಾಗಿ ರಾಜ್ಯದಲ್ಲಿ ಈ ವರ್ಷ ಜೂನ್ ತಿಂಗಳವರೆಗೆ ಶೇಕಡ ೪೨ರಷ್ಟು ಮಳೆ ಕೊರತೆಯಾಗಿದೆ. ಹೀಗಾಗಿ ಅಂತರ್ಜಲ ಕುಸಿದಿದೆ. ರಾಜ್ಯ ಸರ್ಕಾರ ಈಗಾಗಲೇ ೧ ಸಾವಿರದ ೧೭ ಕೋಟಿ ರೂಪಾಯಿ ಹಣವನ್ನು ಕುಡಿಯುವ ನೀರಿಗಾಗಿ ಬಿಡುಗಡೆ ಮಾಡಿದೆ ಎಂದು ಮಾಹಿತಿ ನೀಡಿದ್ದಾರೆ.

---

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಇಂದು ವಸತಿ ಇಲಾಖೆಯ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್, ಆರ್ಥಿಕ ಇಲಾಖೆಯ ಪ್ರಧಾನ ಕಾರ್ಯದರ್ಶಿ ರಿತೇಶ್ ಕುಮಾರ್ ಸಿಂಗ್, ವಸತಿ ಇಲಾಖೆ ಕಾರ್ಯದರ್ಶಿ ಮೋಹನ್ ರಾಜ್, ಕೆ.ಪಿ. ರಾಜೀವ್ ಗಾಂಧಿ ವಸತಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಪರಶುರಾಮ ಶಿನ್ನಾಳಕರ್, ಕರ್ನಾಟಕ ಗೃಹ ಮಂಡಳಿ ಆಯುಕ್ತ ದಯಾನಂದ ಕೆ.ಎ., ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಆಯುಕ್ತ ರಾಘವೇಂದ್ರ ಟಿ ಮತ್ತಿತರ ಅಧಿಕಾರಿಗಳು ಉಪಸ್ಥಿತರಿದ್ದರು.

---

ಬೆಂಗಳೂರಿನಲ್ಲಿ ಇಂದು ಭಾರತದ ಅಧ್ಯಕ್ಷತೆಯಲ್ಲಿ ನಡೆದ ಬ್ರಿಕ್ಸ್ ಬಾಹ್ಯಾಕಾಶ ಏಜೆನ್ಸಿಗಳ ಸಭೆಯ ಸಮಾರೋಪ ಸಮಾರಂಭ ನಡೆಯಿತು. ಸಭೆಯಲ್ಲಿ ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಬಾಹ್ಯಾಕಾಶ ಸಚಿವ ಡಾ.ಜಿತೇಂದ್ರ ಸಿಂಗ್ ಭಾಗವಹಿಸಿದ್ದರು.

ಸಭೆಯಲ್ಲಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳಾದ ಬ್ರೆಜಿಲ್, ಚೀನಾ, ಈಜಿಪ್ಟ್, ಇಥಿಯೋಪಿಯಾ, ಭಾರತ, ಇಂಡೋನೇಷಿಯಾ, ಇರಾನ್, ರಷ್ಯಾ ಸೇರಿದಂತೆ ೧೦ ರಾಷ್ಟ್ರಗಳ ಬಾಹ್ಯಾಕಾಶ ಸಂಸ್ಥೆಗಳ ಮುಖ್ಯಸ್ಥರು ಮತ್ತು ೨೬ ಹಿರಿಯ ಪ್ರತಿನಿಧಿಗಳು ಭಾಗವಹಿಸಿದ್ದರು.

ಈ ಕುರಿತಂತೆ ಆಕಾಶವಾಣಿಗೆ ಮಾಹಿತಿ ನೀಡಿದ ಇಸ್ರೋ ಅಧ್ಯಕ್ಷ ವಿ.ನಾರಾಯಣನ್, ದೂರ ಸಂವೇದಿ ಪ್ರಯೋಜನಗಳು, ಹವಾಮಾನ ಬದಲಾವಣೆ, ವಿಪತ್ತು ನಿರ್ವಹಣೆ ಸೇರಿದಂತೆ ಹಲವು ವಿಷಯಗಳ ಕುರಿತಂತೆ ಚರ್ಚೆ ನಡೆದಿದೆ ಎಂದು ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ನಾಯಕತ್ವದಲ್ಲಿ ಭಾರತ ಇಂದು ಬಾಹ್ಯಾಕಾಶ ಸಂಶೋಧನೆಯಲ್ಲಿ ಗಮನಾರ್ಹ ಸಾಧನೆ ಮಾಡಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ಧ್ವನಿ : ವಿ.ನಾರಾಯಣನ್

---

ದೇವನಹಳ್ಳಿ ತಾಲ್ಲೂಕು ಚನ್ನರಾಯಪಟ್ಟಣ ಹೋಬಳಿಯ ಗೋಕರೆಬಚ್ಚೇನಹಳ್ಳಿ ಮತ್ತು ಹ್ಯಾಡಾಳ ಗ್ರಾಮದಲ್ಲಿ ಕೈಗಾರಿಕಾ ಉದ್ದೇಶಕ್ಕೆ ರೈತರು ಸ್ವಯಂಪ್ರೇರಿತವಾಗಿ ಬಿಟ್ಟುಕೊಡಲು ಒಪ್ಪಿರುವ ೧೨೦ ಎಕರೆ ಜಮೀನಿಗೆ ಪ್ರತೀ ಎಕರೆಗೆ ೨ ಕೋಟಿ ೭೦ ಲಕ್ಷ ರೂಪಾಯಿ ಪರಿಹಾರವನ್ನು ಭೂ-ದರ ನಿರ್ಧಾರಣಾ ಸಲಹಾ ಸಮಿತಿ ನಿಗದಿಪಡಿಸಿ ಕೆಐಎಡಿಬಿಗೆ ಶಿಫಾರಸು ಮಾಡಿದೆ.

ಕೆಐಎಡಿಬಿ ವಿಶೇಷ ಜಿಲ್ಲಾಧಿಕಾರಿ ಎ.ಎನ್.ರಘುನಂದನ್ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಿಗಳು ಹಾಗೂ ಭೂಮಾಲೀಕರ ಜಂಟಿ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ.

ಪರಿಹಾರವನ್ನು ಹಣದ ರೂಪದಲ್ಲಿ ತೆಗೆದುಕೊಳ್ಳಲು ಇಷ್ಟವಿಲ್ಲದಿದ್ದರೆ ಪ್ರತೀ ಎಕರೆ ಕೃಷಿ ಜಮೀನಿಗೆ ಅಭಿವೃದ್ಧಿ ಪಡಿಸಿದ ಕೈಗಾರಿಕಾ ಬಡಾವಣೆಯಲ್ಲಿ ೧೦ ಸಾವಿರದ ೭೮೧ ಚದರ ಅಡಿ ಜಾಗವನ್ನು ಪಡೆದುಕೊಳ್ಳುವುದಕ್ಕೂ ಅವಕಾಶ ನೀಡಲಾಗಿದೆ ಎಂದು ರಘುನಂದನ್ ತಿಳಿಸಿದ್ದಾರೆ.

ಈಗ ನಿಗದಿಪಡಿಸಿರುವ ಪರಿಹಾರ ದರವು ದೇವನಹಳ್ಳಿ ಭಾಗದಲ್ಲೇ ಅತ್ಯಂತ ಹೆಚ್ಚಿನದಾಗಿದೆ. ಸಂತ್ರಸ್ತ ರೈತರಿಗೆ ನ್ಯಾಯಯುತ ಪರಿಹಾರ ಕೊಡಬೇಕೆಂಬುದು ಸರಕಾರದ ಆಶಯವಾಗಿದೆ ಎಂದು ಅವರು ತಿಳಿಸಿದ್ದಾರೆ.

---

ಕೊಪ್ಪಳ ಜಿಲ್ಲೆ ನಾಳೆ ಐತಿಹಾಸಿಕ ಕ್ಷಣಕ್ಕೆ ಸಾಕ್ಷಿಯಾಗುತ್ತಿದ್ದು, ೫೧ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಾಣವಾಗಿರುವ ತುಂಗಭದ್ರಾ ಅಣೆಕಟ್ಟೆಯ ನೂತನ ಕ್ರಸ್ಟ್ ಗೇಟ್‌ಗಳ ಉದ್ಘಾಟನಾ ಸಮಾರಂಭ ನಡೆಯಲಿದೆ.

ಕೇಂದ್ರ ಜಲಸಂಪನ್ಮೂಲ ಸಚಿವ ಸಿ.ಆರ್.ಪಾಟೀಲ್, ಕ್ರಸ್ಟ್ ಗೇಟ್‌ಗಳನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸೇರಿದಂತೆ ಆಂಧ್ರಪ್ರದೇಶ ಹಾಗೂ ತೆಲಂಗಾಣ ಮುಖ್ಯಮಂತ್ರಿಗಳು ಈ ಕಾರ್ಯಕ್ರಮಕ್ಕೆ ಸಾಕ್ಷಿಯಾಗಲಿದ್ದಾರೆ.

೨೦೨೪ರ ಡಿಸೆಂಬರ್‌ನಲ್ಲಿ ಜಲಾಶಯದ ೧೯ನೇ ಕ್ರಸ್ಟ್‌ಗೇಟ್ ಕೊಚ್ಚಿ ಹೋಗುವ ಮೂಲಕ ಲಕ್ಷಾಂತರ ಕ್ಯೂಸೆಕ್ ನೀರು ನದಿಗೆ ಹರಿದು ಹೋಗಿತ್ತು. ಈ ಹಿನ್ನೆಲೆಯಲ್ಲಿ ಭವಿಷ್ಯದ ದೃಷ್ಟಿಯಿಂದ ಸರ್ಕಾರ ೫೧ ಕೋಟಿ ರೂಪಾಯಿ ವೆಚ್ಚದಲ್ಲಿ ಅತ್ಯಾಧುನಿಕ ತಂತ್ರಜ್ಞಾನದೊಂದಿಗೆ ನೂತನ ೩೩ ಕ್ರಸ್ಟ್‌ಗೇಟ್‌ಗಳನ್ನು ಅಳವಡಿಸಿದೆ.

---

ಪಾಕಿಸ್ತಾನದೊಂದಿಗೆ ಸಂಪರ್ಕ ಹೊಂದಿರುವ ಶಂಕಿತ ಭಯೋತ್ಪಾದಕನನ್ನು ದಾವಣಗೆರೆ ಜಿಲ್ಲೆ ಪೊಲೀಸರು ಹಾಗೂ ಗುಪ್ತಚರ ಇಲಾಖೆ ಅಧಿಕಾರಿಗಳು ಬಂಧಿಸಿದ್ದಾರೆ.

ಆರೋಪಿಯನ್ನು ಉತ್ತರಪ್ರದೇಶ ಮೂಲದ ಸುಹೇಲ್ ಎಂದು ಗುರುತಿಸಲಾಗಿದೆ.

ಹರಿಹರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಪಾಕಿಸ್ತಾನ ಮೂಲದ ವ್ಯಕ್ತಿಗಳೊಂದಿಗೆ ಸಾಮಾಜಿಕ ಜಾಲತಾಣಗಳ ಮೂಲಕ ಸಂಪರ್ಕದಲ್ಲಿದ್ದ ಹಿನ್ನೆಲೆಯಲ್ಲಿ ಯುವಕನನ್ನು ಬಂಧಿಸಲಾಗಿದೆ ಎಂದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಚ್.ಟಿ.ಶೇಖರ್ ಸ್ಪಷ್ಟಪಡಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ೨೦ ವರ್ಷದ ಯುವಕನನ್ನು ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ  ವಿಷಯ ಬೆಳಕಿಗೆ ಬಂದಿದೆ ಎಂದು ಮಾಹಿತಿ ನೀಡಿದ್ದಾರೆ.

ಇತ್ತೀಚೆಗೆ ತುಮಕೂರು ಜಿಲ್ಲೆಯಲ್ಲಿ ದಾಖಲಾಗಿದ್ದ ಪ್ರಕರಣಕ್ಕೂ ಹಾಗೂ ಈ ಪ್ರಕರಣಕ್ಕೂ ಸಾಮ್ಯತೆ ಇರುವಂತೆ ಮೇಲ್ನೋಟಕ್ಕೆ ಕಂಡುಬರುತ್ತಿದ್ದು, ತನಿಖೆಯ ನಂತರವಷ್ಟೇ ಈ ಬಗ್ಗೆ ನಿಖರ ಮಾಹಿತಿ ಲಭ್ಯವಾಗಲಿದೆ ಎಂದು ತಿಳಿಸಿದ್ದಾರೆ.

ಧ್ವನಿ: ಎಚ್.ಟಿ.ಶೇಖರ್

---

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಅವರ ಪುತ್ರ ಪ್ರಿಯಾಂಕ್ ಖರ್ಗೆ ಸಿದ್ಧಾರ್ಥ ವಿಹಾರ ಟ್ರಸ್ಟ್ ಮೂಲಕ ಬಡವರಿಗೆ ಸೇರಿದ ಭೂಮಿಯನ್ನು ಕಬಳಿಸಿದ್ದಾರೆ ಎಂದು ಬಿಜೆಪಿ ವಕ್ತಾರ ಪ್ರದೀಪ್ ಭಂಡಾರಿ ಆರೋಪಿಸಿದ್ದಾರೆ.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಟ್ರಸ್ಟ್‌ನಲ್ಲಿ ಮಲ್ಲಿಕಾರ್ಜುನ ಖರ್ಗೆ, ಪುತ್ರ ಪ್ರಿಯಾಂಕ್ ಖರ್ಗೆ, ಅಳಿಯ ಮತ್ತು ಅವರ ಪತ್ನಿ ಸದಸ್ಯರಾಗಿದ್ದಾರೆ.

೨೦೨೪ರಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದ್ದಾಗ ಏರೋಸ್ಪೇಸ್, ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿಯ ಹೆಸರಿನಲ್ಲಿ ಕೆಐಎಡಿಬಿಯ ೫ ಎಕರೆ ಭೂಮಿಯನ್ನು ಸಿದ್ಧಾರ್ಥ ವಿಹಾರ ಟ್ರಸ್ಟ್‌ಗೆ ಮಂಜೂರು ಮಾಡಲಾಗಿದೆ ಎಂದು ಆರೋಪಿಸಿದ್ದಾರೆ.

---

ದಾವಣಗೆರೆ ನಗರವನ್ನು ಸ್ವಚ್ಛವಾಗಿಡುವ ನಿಟ್ಟಿನಲ್ಲಿ ದಾವಣಗೆರೆ ಜಿಲ್ಲಾಡಳಿತ ಹಾಗೂ ಮಹಾನಗರ ಪಾಲಿಕೆ ಕಠಿಣ ಕ್ರಮಕ್ಕೆ ಮುಂದಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ  ಕಸ ಎಸೆಯುವವರ ವಿರುದ್ಧ ಕೇವಲ ದಂಡ ವಿಧಿಸುವುದಷ್ಟೇ ಅಲ್ಲದೆ, ಅವರ ಫೋಟೋಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಪ್ರಕಟಿಸಿ ಅವರ ಮನೆ ಮುಂದೆಯೇ ಮರಳಿ ಕಸ ತಂದು ಸುರಿಯುವ ವಿನೂತನ "ಶಿಕ್ಷೆ" ಜಾರಿಗೆ ತರಲು ನಿರ್ಧರಿಸಿದೆ.

ಈ ಕುರಿತು ಮಾಹಿತಿ ನೀಡಿದ ಜಿಲ್ಲಾಧಿಕಾರಿ ಡಾ.ಗಂಗಾಧರ್ ಸ್ವಾಮಿ, ನಗರದ ಸ್ವಚ್ಛತೆ ಕಾಪಾಡಲು ಸಾರ್ವಜನಿಕರ ಸಹಕಾರ ಅತ್ಯಗತ್ಯ ಎಂದು ತಿಳಿಸಿದ್ದಾರೆ. ಆದರೆ ಕೆಲವರು ಎಲ್ಲೆಂದರಲ್ಲಿ ಕಸ ಎಸೆಯುತ್ತಿರುವುದು ಗಮನಕ್ಕೆ ಬಂದಿದ್ದು, ಇದನ್ನು ತಡೆಯಲು  ಕಠಿಣ ಕ್ರಮ ಅನಿವಾರ್ಯವಾಗಿದೆ ಎಂದು ಹೇಳಿದ್ದಾರೆ.

---

ರಾಮನಗರ ಜಿಲ್ಲೆಯ ಚನ್ನಪಟ್ಟಣ ಪಟ್ಟಣದ ಸರ್ಕಾರಿ ಬಾಲಕರ ಪದವಿಪೂರ್ವ ಕಾಲೇಜು ಮೈದಾನದಲ್ಲಿ ಆಯೋಜಿಸಲಾದ ಬೃಹತ್ ಶೈಕ್ಷಣಿಕ ಪರಿಕರಗಳ ವಿತರಣಾ ಸಮಾರಂಭ ಇಂದು ನಡೆಯಿತು.

ಚನ್ನಪಟ್ಟಣ ತಾಲ್ಲೂಕಿನ ಒಂದನೇ ತರಗತಿಯಿಂದ ದ್ವಿತೀಯ ಪಿ.ಯು.ಸಿ.ವರೆಗಿನ ಸುಮಾರು ೧೮ ಸಾವಿರ ಸರ್ಕಾರಿ ಶಾಲಾ ಮಕ್ಕಳಿಗೆ ಶಾಲಾ ಬ್ಯಾಗ್, ಪುಸ್ತಕಗಳು ಹಾಗೂ ಇತರೆ ಶೈಕ್ಷಣಿಕ ಪರಿಕರಗಳನ್ನು ವಿತರಿಸಲಾಯಿತು.

ಸಂಸದ ಡಾ. ಸಿ.ಎನ್.ಮಂಜುನಾಥ್, ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪರೀಕ್ಷೆಗಳಲ್ಲಿ ಅತ್ಯುತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ, ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, “ಮಕ್ಕಳನ್ನೇ ಆಸ್ತಿಯನ್ನಾಗಿ ಬೆಳೆಸುವಂತೆ ಕರೆ ನೀಡಿದರು. ಸಮಾಜದ ಪರಿವರ್ತನೆಗೆ ಮತ್ತು ರಾಷ್ಟ್ರ ನಿರ್ಮಾಣಕ್ಕೆ ಶಿಕ್ಷಣ ಅತ್ಯಂತ ಪರಿಣಾಮಕಾರಿ ಸಾಧನವಾಗಿದೆ ಎಂದು ತಿಳಿಸಿದರು.

---

ಚಿತ್ರದುರ್ಗ ಜಿಲ್ಲೆಯಲ್ಲಿ ರೈತರಿಗೆ ರಸಗೊಬ್ಬರ ವಿತರಿಸಲು 'ಫರ್ಟಿಲೈಸರ್ ಸೇಲ್ಸ್ ಅಪ್ಲಿಕೇಶನ್ ಸಿಸ್ಟಮ್' ನಾಳೆಯಿಂದ ಪ್ರಾಯೋಗಿಕವಾಗಿ ಜಾರಿಗೆ ಬರಲಿದೆ ಎಂದು ಜಂಟಿ ಕೃಷಿ ನಿರ್ದೇಶಕ ಬಿ.ಮಂಜುನಾಥ್ ತಿಳಿಸಿದ್ದಾರೆ.

ಕೇಂದ್ರ ಸರ್ಕಾರದ 'ಫ್ರೇಮ್‌ವರ್ಕ್ ಫಾರ್ ಫರ್ಟಿಲೈಸರ್ ಸೇಲ್' ಯೋಜನೆಯಡಿ ಈ ಡಿಜಿಟಲ್ ವ್ಯವಸ್ಥೆ ಜಾರಿಯಾಗುತ್ತಿದ್ದು, ರಾಜ್ಯದಲ್ಲಿ ಚಿತ್ರದುರ್ಗ ಮತ್ತು ತುಮಕೂರು ಜಿಲ್ಲೆಗಳನ್ನು ಆಯ್ಕೆ ಮಾಡಲಾಗಿದೆ.

ನಾಳೆ ಮಧ್ಯಾಹ್ನ ೩ ಗಂಟೆಗೆ ನಗರದ ಟಿಪಿಎಂಎಸ್ ಆವರಣದಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ.ಎಸ್.ಆಕಾಶ್ ಅವರ ಸಮ್ಮುಖದಲ್ಲಿ ಈ ವ್ಯವಸ್ಥೆಗೆ ಚಾಲನೆ ದೊರೆಯಲಿದೆ.

ಹೊಸ ವ್ಯವಸ್ಥೆಯಲ್ಲಿ ರೈತರು ಅಗತ್ಯವಿರುವ ರಸಗೊಬ್ಬರವನ್ನು ಎರಡು ದಿನ ಮುಂಗಡವಾಗಿ ಮೊಬೈಲ್ ಆಪ್ ಮೂಲಕ ಕಾಯ್ದಿರಿಸಬಹುದು. ಅರ್ಜಿ ದೃಢೀಕರಿಸಿದ ನಂತರ ಆಯ್ಕೆ ಮಾಡಿದ ಅಂಗಡಿಯಿಂದ ಅನುದಾನಿತ ರಸಗೊಬ್ಬರ ಪಡೆಯಬಹುದು. ಇದರಿಂದ ರೈತರ ಸಮಯ ಮತ್ತು ಶ್ರಮ ಉಳಿತಾಯವಾಗಲಿದೆ.

---

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ರಾಷ್ಟ್ರೀಯ ಪಲ್ಸ್ ಪೋಲಿಯೋ ಅಭಿಯಾನವು ಇದೇ ೨೮ ರಿಂದ ಜುಲೈ ೧ ರವರೆಗೆ ನಡೆಯಲಿದ್ದು, ಜಿಲ್ಲೆಯಲ್ಲಿ ೫ ವರ್ಷದೊಳಗಿನ ಒಟ್ಟು ೧ ಲಕ್ಷದ ೪೩೪ ಮಕ್ಕಳಿಗೆ ಪಲ್ಸ್ ಪೋಲಿಯೋ ಹಾಕುವ ಗುರಿಯನ್ನು ಹೊಂದಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಕೆ.ಎನ್.ಅನುರಾಧ ತಿಳಿಸಿದ್ದಾರೆ.

---